# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತಮೂರನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಶುಕ್ರವಾರ, ದಿನಾಂಕ: 29ನೇ ಜನವರಿ, 2021**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಒಂದನೇ ಮತ್ತು ಎರಡನೇ ಪಟ್ಟಿಯ ರೀತ್ಯಾ.

### 02. ಕಾರ್ಯದರ್ಶಿಯವರ ವರದಿ

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಸಭೆಯಲ್ಲಿ ಮಂಡಿಸುವುದು.

### 03. ವರದಿಯನ್ನೊಪ್ಪಿಸುವುದು

**ಶ್ರೀ ಮರಿತಿಬ್ಬೇಗೌಡ** (ಅಧ್ಯಕ್ಷರು, ಸದನ ಸಮಿತಿ) ಅವರು ದಿನಾಂಕ:15.12.2020ರಂದು ವಿಧಾನ ಪರಿಷತ್ತಿನ ಸದನದಲ್ಲಿ ನಡೆದ ಅಹಿತಕರ ಘಟನೆಯ ಕುರಿತು ಪರಿಶೀಲಿಸಲು ರಚಿಸಿರುವ ಸದನ ಸಮಿತಿಯ ಮಧ್ಯಂತರ ವರದಿಯನ್ನೊಪ್ಪಿಸುವುದು.

### 04. ಉಪ ಸಭಾಪತಿ ಸ್ಥಾನಕ್ಕೆ ಚುನಾವಣೆ

01. **ಶ್ರೀ ಶಶೀಲ್ ಜಿ. ನಮೋಶಿ ಅವರು ಶ್ರೀ ಎಂ.ಕೆ. ಪ್ರಾಣೇಶ್** ಅವರನ್ನು ವಿಧಾನ ಪರಿಷತ್ತಿನ ಉಪ ಸಭಾಪತಿಯವರನ್ನಾಗಿ ಚುನಾಯಿಸಬೇಕೆಂದು ಸೂಚಿಸುವುದು.

    **ಶ್ರೀ ರಘುನಾಥ್ ರಾವ್ ಮಲ್ಕಾಪುರೆ** ಅವರು ಪ್ರಸ್ತಾವನೆಯನ್ನು ಅನುಮೋದಿಸುವುದು.

02. **ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ** ಅವರು **ಶ್ರೀ ಎಂ.ಕೆ. ಪ್ರಾಣೇಶ್** ಅವರನ್ನು ವಿಧಾನ ಪರಿಷತ್ತಿನ ಉಪ ಸಭಾಪತಿಯವರನ್ನಾಗಿ ಚುನಾಯಿಸಬೇಕೆಂದು ಸೂಚಿಸುವುದು.

    **ಡಾ: ತೇಜಸ್ವಿನಿಗೌಡ** ಅವರು ಪ್ರಸ್ತಾವನೆಯನ್ನು ಅನುಮೋದಿಸುವುದು.

03 **ಶ್ರೀ ಎಸ್.ಆರ್. ಪಾಟೀಲ್ ಅವರು ಶ್ರೀ ಕೆ.ಸಿ. ಕೊಂಡಯ್ಯ** ಅವರನ್ನು ವಿಧಾನ ಪರಿಷತ್ತಿನ ಉಪ ಸಭಾಪತಿಯವರನ್ನಾಗಿ ಚುನಾಯಿಸಬೇಕೆಂದು ಸೂಚಿಸುವುದು.

    **ಶ್ರೀ ಎಂ. ನಾರಾಯಣಸ್ವಾಮಿ** ಅವರು ಪ್ರಸ್ತಾವನೆಯನ್ನು ಅನುಮೋದಿಸುವುದು.

04. **ಶ್ರೀ ಅಲ್ಲಂ ವೀರಭದ್ರಪ್ಪ ಅವರು ಶ್ರೀ ಕೆ.ಸಿ. ಕೊಂಡಯ್ಯ** ಅವರನ್ನು ವಿಧಾನ ಪರಿಷತ್ತಿನ ಉಪ ಸಭಾಪತಿಯವರನ್ನಾಗಿ ಚುನಾಯಿಸಬೇಕೆಂದು ಸೂಚಿಸುವುದು.

    **ಶ್ರೀ ಬಿ.ಕೆ. ಹರಿಪ್ರಸಾದ್** ಅವರು ಪ್ರಸ್ತಾವನೆಯನ್ನು ಅನುಮೋದಿಸುವುದು.

...2..

## 05. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

## 06. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

ಅ) "2021ನೇ ಜನವರಿ, 28ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಸದಸ್ಯರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಸದಸ್ಯರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು **ಶ್ರೀ ಆಯನೂರು ಮಂಜುನಾಥ್** ಅವರು ಸೂಚಿಸುವುದು;

ಆ) **ಶ್ರೀ ಎಸ್.ವ್ಹಿ. ಸಂಕನೂರ** ಅವರು ಅನುಮೋದಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**